# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ:ತುವಿ:ಅ.ವಿ:2024-25/೩೦೩೬ ದಿನಾಂಕ:04.09.2024

## : ಸುತ್ತೋಲೆ :

ವಿಷಯ : ದಿನಾಂಕ:05.09.2024 ರಂದು ಆಚರಿಸಲಿರುವ "ಶಿಕ್ಷಕರ ದಿನಾಚರಣೆ" ಮತ್ತು "ಭಾರತರತ್ನ ಸರ್ವಪಲ್ಲಿ ರಾಧಾಕೃಷ್ಣನ್ ರವರ ಜಯಂತಿ" ಕಾರ್ಯಕ್ರಮದಲ್ಲಿ ಭಾಗವಹಿಸುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:04.09.2024

******

ತುಮಕೂರು ವಿಶ್ವವಿದ್ಯಾನಿಲಯದಲ್ಲಿ **ದಿನಾಂಕ:05.09.2024 ರಂದು ಬೆಳಗ್ಗೆ 11.00 ಗಂಟೆಗೆ "ಶಿಕ್ಷಕರ ದಿನಾಚರಣೆ"** ಮತ್ತು **"ಭಾರತರತ್ನ ಸರ್ವಪಲ್ಲಿ ರಾಧಾಕೃಷ್ಣನ್ ರವರ ಜಯಂತಿ"** ಕಾರ್ಯಕ್ರಮವನ್ನು ಸರ್. ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರೊ. ಎಂ. ವೆಂಕಟೇಶ್ವರಲು, ಮಾನ್ಯ ಕುಲಪತಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರು ವಹಿಸಲಿದ್ದು, ಪ್ರೊ. ಸಿದ್ದಪ್ಪ ಕೆ., ವಿಶ್ರಾಂತ ಕುಲಪತಿಗಳು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು ಇವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಶ್ರೀಮತಿ ನಾಹಿದಾ ಜಮ್ ಜಮ್, ಕೆ.ಎ.ಎಸ್., ಕುಲಸಚಿವರು, ಪ್ರೊ. ಪ್ರಸನ್ನಕುಮಾರ್ ಕೆ., ಕುಲಸಚಿವರು (ಪರೀಕ್ಷಾಂಗ) ಹಾಗೂ ಶ್ರೀ ನರಸಿಂಹಮೂರ್ತಿ, ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ ಇವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ.

ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳು ಮತ್ತು ಘಟಕ ಕಾಲೇಜುಗಳ ಎಲ್ಲಾ ಬೋಧಕ ಸಿಬ್ಬಂದಿಗಳು **ದಿನಾಂಕ:05.09.2024 ರಂದು ಬೆಳಗ್ಗೆ 10.45ಕ್ಕೆ** ಸರ್.ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಹಾಜರಿದ್ದು, ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ತಿಳಿಸಲಾಗಿದೆ.

ಸದರಿ ಮಾಹಿತಿಯನ್ನು ತಮ್ಮ ಅಧೀನದಲ್ಲಿನ ಎಲ್ಲಾ ಬೋಧಕ ಸಿಬ್ಬಂದಿಗಳ ಗಮನಕ್ಕೆ ತರುವುದು.

ಆದೇಶದ ಮೇರೆಗೆ

4/9/24

ಉಪಕುಲಸಚಿವರು
(ಅಭಿವೃದ್ಧಿ ವಿಭಾಗ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಸಂಯೋಜಕರು, ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು: **ಕಾರ್ಯಕ್ರಮ ಆಯೋಜನೆಗೆ ಅಗತ್ಯ ಕ್ರಮವಹಿಸುವುದು.**
2. ಎಸ್ಟೇಟ್ ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು: **(ವಿವಿ ಜಾಲತಾಣದಲ್ಲಿ ಭಿತ್ತರಿಸುವಂತೆ ಹಾಗೂ ಸಿಬ್ಬಂದಿಗೆ ಸಂದೇಶವನ್ನು ಕಳುಹಿಸುವಂತೆ ಸೂಚಿಸಿದೆ)**
4. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಕಚೇರಿ ಪ್ರತಿ